# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 638
2. ಮಾನ್ಯ ಸದಸ್ಯರ ಹೆಸರು – ಡಾ: ತಳವಾರ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ – 19/09/2022
4. ಉತ್ತರಿಸುವ ಸಚಿವರು – ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಪ್ರಶ್ನೆ | ಉತ್ತರ |
|---|---|
| ಅ) ರಾಜ್ಯದಲ್ಲಿ ನೂತನವಾಗಿ ಸ್ಥಾಪನೆಗೊಂಡ ತಾಲ್ಲೂಕುಗಳಿಗೆ ಬಿ.ಇ.ಓ. ಗಳನ್ನು ನೇಮಕ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;<br><br>ಆ) ಶಿಕ್ಷಕರ ಕೆಲಸ, ಶಿಕ್ಷಣದ ಯೋಜನೆಗಳು, ಮಧ್ಯಾಹ್ನದ ಬಿಸಿ ಊಟ ಮತ್ತು ಹಲವಾರು ಸರ್ಕಾರದ ಯೋಜನೆಗಳನ್ನು ಎರಡು/ಮೂರು ತಾಲ್ಲೂಕುಗಳಲ್ಲಿ ಒಬ್ಬರೆ ಬಿ.ಇ.ಓ. ಗಮನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಹೊಸ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳನ್ನು ಪ್ರಾರಂಭಿಸಲು ಅಗತ್ಯವಿರುವ ವಿವಿಧ ವೃಂದಗಳ ಸುಮಾರು 1000ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸಲು ಪ್ರಸ್ತಾವನೆಯನ್ನು 2021-22ನೇ ಸಾಲಿನ ಆಯವ್ಯಯ ಪೂರ್ವಬಾವಿ ಸಭೆಯಲ್ಲಿ ಮಂಡಿಸಲಾಗಿತ್ತು. ಆದರೆ, ಈ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು 2021-22ನೇ ಸಾಲಿನ ಆಯವ್ಯಯದಲ್ಲಿ ಪರಿಗಣಿಸಿರುವುದಿಲ್ಲ.<br><br>ಆದಕಾರಣ, ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ತಾತ್ಕಾಲಿಕವಾಗಿ ಕಛೇರಿಯನ್ನು ಪ್ರಾರಂಭಿಸುವ ಅವಕಾಶಗಳ ಬಗ್ಗೆ ಪರಿಶೀಲಿಸಲು, ಪ್ರಸ್ತುತ ಲಭ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಹಾಗೂ ಸ್ಥಳಾಂತರಿಸಬಹುದಾದ ಸಿಬ್ಬಂದಿಗಳ ವಿವರಗಳೊಂದಿಗೆ ವರದಿಯನ್ನು ಸಲ್ಲಿಸುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತಾಲಯಗಳನ್ನು ಕೋರಲಾಗಿತ್ತು.<br><br>ಈ ಬಗ್ಗೆ ಆಯುಕ್ತಾಲಯಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯಲ್ಲಿ ಕೆಲವು ಹುದ್ದೆಗಳನ್ನು ಮರುವಿನ್ಯಾಸಗೊಳಿಸುವುದರ ಜೊತೆಗೆ ಸುಮಾರು 900ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸುವುದು ಅತ್ಯಾವಶ್ಯಕವಾಗಿದೆ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಲಾಗಿರುತ್ತದೆ. ಹಾಗೆಯೇ, ಕಚೇರಿ ಪ್ರಾರಂಭಿಸಲು ಕಟ್ಟಡ ಲಭ್ಯವಿಲ್ಲದೇ ಇರುವ ಸ್ಥಳಗಳಲ್ಲಿ ಬಾಡಿಗೆ ಕಟ್ಟಡಗಳನ್ನು ಪಡೆಯಲು ಮತ್ತು ಹೊಸ ಕಚೇರಿಗಳಲ್ಲಿ ಅಧಿಕಾರಿ/ಸಿಬ್ಬಂದಿಗಳ ವೇತನ ಭರಿಸಲು, ಅಗತ್ಯ |

| | |
|---|---|
| | ಮೂಲಭೂತ ಸೌಕರ್ಯ ಒದಗಿಸಲು ಹಾಗೂ ಕಚೇರಿ ನಿರ್ವಹಣೆಗಾಗಿ ಅನುದಾನದ ಅಗತ್ಯವಿರುವುದಾಗಿ ಪ್ರಸ್ತಾಪಿಸಲಾಗಿರುತ್ತದೆ.<br><br>ಈ ಪ್ರಸ್ತಾವನೆಯಲ್ಲಿನ ಕೆಲವು ಅಂಶಗಳ ಕುರಿತು ಸ್ಪಷ್ಟೀಕರಣ / ಹೆಚ್ಚುವರಿ ಮಾಹಿತಿಯನ್ನು ಸಲ್ಲಿಸುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರನ್ನು ಕೋರಲಾಗಿದ್ದು, ಮಾಹಿತಿ ಸ್ವೀಕೃತವಾದ ಕೂಡಲೇ ಪರಿಶೀಲಿಸಿ ರಾಜ್ಯದಲ್ಲಿ ಹೊಸ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲು ಕ್ರಮವಹಿಸಲಾಗುವುದು. |
| ಇ) ಹಾಗಿದ್ದಲ್ಲಿ, ಎಲ್ಲಾ ಕೆಲಸಗಳನ್ನು ನೋಡಿಕೊಂಡು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮಟ್ಟದಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗುತ್ತದೆಯೆ; | ಸರ್ಕಾರದ ಯೋಜನೆಗಳ ಅನುಷ್ಠಾನವು ಇಲಾಖೆಯಲ್ಲಿನ ವಿವಿಧ ಸ್ತರದ ಅಧಿಕಾರಿಗಳ ಸಮನ್ವಯದೊಂದಿಗೆ ಆಗುತ್ತಿದ್ದು, ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದೆ. |

ಸಂಖ್ಯೆ: ಇಪಿ 56 ಪಿಡಿಬಿ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು